ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಶ್ರೀ/

ಇಲಾಖೆ / ವಿಷಯ : DEPARTMENT / SUBJECT: ಸಭಾಪತಿಯವರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE : 15/3/21

# ಸಭಾಪತಿ ಸ್ಥಾನಕ್ಕೇರಲು ಹೆಚ್‌ಡಿಡಿ ಕಾರಣ

ಮಳವಳ್ಳಿ: ವಿಧಾನಪರಿಷತ್ ಸಭಾಪತಿಯಾಗಲು ಮಾಜಿ ಪ್ರಧಾನಿ ದೇವೇಗೌಡರೇ ಕಾರಣರಾಗಿದ್ದು, ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ವಿಧಾನಪರಿಷತ್ ರಾಜ್ಯ ಸಭಾಪತಿ ಬಸವರಾಜಹೊರಟ್ಟಿ ತಿಳಿಸಿದರು.



ತಾಲ್ಲೂಕಿನ ಕನಕಪುರ ಮುಖ್ಯರಸ್ತೆಯ ನಡುಕಲಪುರ ಗೇಟ್‌ನಲ್ಲಿ ಎಚ್‌ಡಿ ಕುಮಾರಣ್ಣ ಗೆಳೆಯರ ಬಳಗದ ವತಿಯಿಂದ ನಡೆದ ಅಭಿನಂದನಾ ಸಮಾರಂಭ ಹಾಗೂ ಮೊದಲನೇ ವರ್ಷದ ರಾಜ್ಯ ಮಟ್ಟದ ಜೋಡಿ ಹಸುಗಳ ಗಾಡಿ ಓಟದ ಸ್ಪರ್ಧೆ ಮತ್ತು ಅಭಿನಂದನಾ ಕಾರ್ಯಕ್ರಮದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿ, ಬಿಜೆಪಿ ಸದಸ್ಯರು ಹೆಚ್ಚು ಸದಸ್ಯರು ಇದ್ದರು, ಜೆಡಿಎಸ್‌ಗೆ ಸಭಾಪತಿ ಸ್ಥಾನ ಕೊಡಲ್ಲ ಎಂದು ಹೇಳಿದ್ದರು, ಆದರೇ ಮಾಜಿ ಪ್ರಧಾನಿ ದೇವೇಗೌಡರು ಪ್ರಧಾನಿ ಮೋದಿ ಜತೆ ಮಾತನಾಡಿ ಸಭಾಪತಿ ಸ್ಥಾನ ನನಗೆ ಸಿಗುವಂತೆ ಮಾಡಿದ್ದರು. ಅವರು ನನ್ನ ಮೇಲೆ ಇಟ್ಟಿರುವ ನಂಬಿಕೆಗೆ ಚ್ಯುತಿ ಬಾರದ ರೀತಿಯಲ್ಲಿ ಕರ್ತವ್ಯ ನಿರ್ವಹಿಸುವುದಾಗಿ ಹೇಳಿದರು.

ತಾನು ಹಲವಾರು ಮುಖ್ಯಮಂತ್ರಿಗಳನ್ನು ನೋಡಿದ್ದೇನೆ, ಸಾಮಾನ್ಯ ಜನರ ಬದುಕು ಕಟ್ಟಿಕೊಡಲು ಸಹಾಯ ಮಾಡಿದ ಕೀರ್ತಿ ಕುಮಾರಸ್ವಾಮಿ ಅವರಿಗೆ ಸಲ್ಲುತ್ತದೆ, ಸಾಮಾನ್ಯ ಕಾರ್ಯಕರ್ತನಾಗಿ ದುಡಿದ ತನಗೆ ಹಲವಾರು ಅಧಿಕಾರವನ್ನು ಕೊಟ್ಟಿದ್ದಾರೆ, ಮೊಟ್ಟ ಮೊದಲ ಭಾರಿಗೆ ಮಳವಳ್ಳಿಯಲ್ಲಿ ತನ್ನನ್ನು ಅಭಿನಂದಿಸುತ್ತಿರುವುದಕ್ಕೆ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು.